# ನಾಯಿ ಬಾಲ ಡೊಂಕು ಯಾಕೆ?



■ ಸಂತೆಬೆನ್ನೂರು ಫೈಜ್ನಟ್ರಾಜ್

ಕಲೆ: ಸಂತೋಷ್ ಸಸಿಹಿತ್ಲು

ಜೀವನದಲ್ಲಿ ಎಲ್ಲವೂ ಸರಿ ಇರುವುದಿಲ್ಲ ಅಂತ ನಮ್ಮೆಲ್ಲರಿಗೂ ಗೊತ್ತು. ಒಮ್ಮೊಮ್ಮೆ ಒಂದೊಂದು ಹೇಗೋ ಎಡವಟ್ಟಾಗಿರುತ್ತೆ. ನಾವೇ ಸರಿ ಮಾಡ್ಕೋಬೇಕಪ್ಪ ಅನ್ನೋ ಅಮ್ಮನ ಮಾತು ನಮ್ಮ ಪುಟಾಣಿ ಮಗಳು ನಂಬ್ತಾನೇ ಇಲ್ಲ? ಅವಳು ಆಡುವ ನೂರಾರು ತರದ ಆಟದ ಸಾಮಾನುಗಳೆಲ್ಲಾ ಎಷ್ಟು ನೀಟಾಗಿವೆ ಅನ್ನುವ ಅರ್ಥದಲ್ಲಿ ಅವಳು ಅಮ್ಮನ ಬಳಿ ವಾದ ಮಾಡುತ್ತಿದ್ದಾಳೆ.

ಅದೆಂಗ್ ಸರಿ ಇರಲ್ಲ? ದೇವರು ತಪ್ಪು ಮಾಡುತ್ತಾನಾ? ಭೂಮಿ, ಆಕಾಶ, ಮರಗಿಡ ಬಳ್ಳಿ, ಮಳೆ, ಬೆಳೆ, ಶಾಲೆ, ಮಿಸ್ಸು, ಪಾಠ, ಪಾಸುಫೇಲು ಎಲ್ಲಾ ಅಂದ್ರೆ ಎಲ್ಲಾ ಕರೆಕ್ಟಿದೆಯಲ್ಲಾ? ಮಗಳ ತರ್ಕ.

ಅಷ್ಟರಲ್ಲಿ ನಮ್ ಕರಿಯ ಹೊರಗಿಂದ ಜೋರು ಬೊಗಳಿದ. ಹಸಿವಾಗಿತ್ತೇನೋ... ಮಗಳೇ ಅನ್ನ ಹಾಲು ಕಲೆಸಿ ಬಟ್ಟಲು ತೆಗೆದುಕೊಂಡು ಹೋಗಿ ಸಡನ್ನಾಗಿ ಬಂದಳು.

ಬಂದವಳೇ 'ಅಬ್ಬೂ ನಮ್ಮ ಕರಿಯನ ಬಾಲ ಯಾಕೆ ಸೊಟ್ಟ ಇದೆ?'

ನಂಗ್ ಬ್ರೇಕ್ ಸಿಕ್ತೀಗ, ಮಾಸಿಕವೊಂದನ್ನು ಓದುತ್ತಿದ್ದ ನಾನು ಪಕ್ಕಕ್ಕಿಟ್ಟು 'ನೀನೇ ಈಗ ತಾನೇ ಹೇಳಿದೆ, ಎಲ್ಲಾ ಸರಿಯಿರುತ್ತೆ ಅಂತ' ನಾಯಿ ಬಾಲ ಡೊಂಕು ಯಾಕೊ ಗೊತ್ತಿಲ್ಲ, ಆನೆ ಬಾಲ, ಎಮ್ಮೆ ಬಾಲ, ಹಾವಿನ ಬಾಲ, ಕುದುರೆ ಬಾಲ ಎಲ್ಲ ನೇರ ನಮ್ ಕರಿಯನ ಬಾಲ ಮಾತ್ರ ಯಾಕೆ ಡೊಂಕು? ಕುತೂಹಲ ಹೊರಹಾಕಿದಳು.

ಅವರಮ್ಮ ತಲೆಗೊಂದು ಮೊಟಕಿ 'ನಿನ್ನ ಕರಿಯಂಗಷ್ಟೇ ಅಲ್ಲ, ಎಲ್ಲಾ ನಾಯಿ ಬಾಲ ಡೊಂಕೇ; ನಮ್ಮ ಕೆಲವು ನಾಯಕರಂತೆ!' ಅನ್ನುತ್ತಾ ಅಡುಗೆ ಮನೆ ಕಡೆ ಹೋದಳು.

ಅಬ್ಬೂ ಬೇರೆ ನಾಯಿ ಕತೆ ಹಾಳಾಗಿ ಹೋಗಲಿ ನಮ್ ಕರಿಯನ ಬಾಲ ಸೀದಾ ಮಾಡನ?

'ನಿಮ್ಮಮ್ಮ ಹೇಳಲಿಲ್ವೇ? ನಮ್ಮ ಕೆಲ ರಾಜಕಾರಣಿಗಳ ತರ ಅದು, ಎಂದಿಗೂ ನೇರ ಆಗಲ್ಲ. ಮ್ಯಾನು ಫ್ಯಾಕ್ಚರ್ ಡಿಫೆಕ್ಟ್ ಅಷ್ಟೆ! ಅಂದೆ.'

'ಅದೇಕೆ ಹಾಗೆ ಅಂತ? ಪಾಪ ನಮ್ ಕರಿಯನ ಬಾಲ ನೋಡಿ ಅವನ ಫ್ರೆಂಡ್ಸು, ಬೇರೆ ಪ್ರಾಣಿಗಳು ಎಷ್ಟು ಆಡ್ಕಂಡವೋ, ಏನೇನಂತ ಮಾತಾಡಿಕೊಂಡು ನಕ್ವೋ ಏನೋ ಎಷ್ಟು ಶೇಮ್ ಆಯ್ತೋ ಪಾಪ' ಅಂತ ಲೊಚಗುಟ್ಟಿದಳು.

'ಮನುಷ್ಯ ಮಾತ್ರ ಇನ್ನೊಬ್ಬರನ್ನ ಆಡ್ಕಂಡು ನಗೋದು, ಅವರಿವರ ಕಾಲೆಳೆಯೋದು ಯಾವ ಪ್ರಾಣಿಗಳಲ್ಲೂ ಅಂಥಾ ಕೆಟ್ಟ ಗುಣ ಇಲ್ಲ ಗೊತ್ತಾ' ಅಂದಳು ಅವಳಮ್ಮ ಒಳಗೆ ಒಗ್ಗರಣೆ ಹಾಕುತ್ತಾ!

'ಹಂಗಾರೆ ನಾಯಿಗಳು ಒಮ್ಮೆಯೂ ತಮ್ಮ ಸೊಟ್ಟ ಬಾಲದ ಬಗ್ಗೆ ಬೇಸರ ಮಾಡ್ಕೊಂಡಿಲ್ಲವಾ?' ಮಗಳು ಪ್ರಶ್ನೆ ಎಸೆದಳು.

ಯಾಕ್ ಮಾಡಿಕೊಂಡಿಲ್ಲ? ಬಹಳ ಸಾರಿ ಮಾಡಿಕೊಂಡಿವೆ. ಹಾವುಗಳು ನಮ್ಮ ಬಾಯಿಂದ ವಿಷ ಬರುತ್ತೆ ಅಂತ, ಚೇಳು ತಮ್ಮ ಕೊಂಡಿಯಿಂದ ವಿಷ ಅಂತ, ಕಾಗೆ ತಾನು ಕಪ್ಪು ಅಂತ, ಆನೆ ತನಗೆ ಮೈ ಭಾರ ಅಂತ, ಇರುವೆ ನನ್ನನ್ನು ಎಲ್ಲರೂ ತುಳಿತಾರಂತ, ಗೂಬೆ ತಾನು ಅನಿಷ್ಟ ಅಂತ, ಕರಡಿಗೆ ಮೈ ತುಂಬಾ ಕೂದಲಂತ......ಹೀಗೇ ಎಲ್ಲಾ ಪ್ರಾಣಿಗಳಿಗೂ ಒಂದೊಂದು ಅಸಮಾಧಾನ ಇದ್ದೇ ಇತ್ತು ಮತ್ತು ಇದೆ ಕೂಡಾ!

ಬೇರೆಯವರದು ಬಿಡಿ ಅಬ್ಬೂ.. ನಾಯಿ ಬಾಲದ್ ಕತೆ ಹೇಳಿ ಹಟದಂತೆ ಹೇಳಿದಳು.

ಅಯ್ಯೋ ಅದು ಹದಿನಾರನೇ ಶತಮಾನ ಅಂತ ಕಾಣತ್ತಮ್ಮ, ನಮ್ಮ ಪುರಂದರ ದಾಸರು 'ಡೊಂಕು ಬಾಲದ ನಾಯಕರೇ ನೀವೇನೂಟವ ಮಾಡಿದಿರಿ...' ಅನ್ನುವ ಬಲು ಘಾಟಿನ ಕೀರ್ತನೆ ಅದು.

ನಾಯಿ ಬಾಲದ ವಿಚಾರ ಹೇಳಪ್ಪ ಅಂದ್ರೇ... ರಾಗ ತೆಗೆದಳು.

ಅಲ್ಲಿಗೇ ಬಂದೆ ಇರಮ್ಮ, ನಮ್ಮ ಸಮಾಜದಲ್ಲಿನ ನಾಯಕರು ಅಂತ ಅನ್ನಿಸಿಕೊಂಡ ಮಂದಿ ಸಮಾಜಸೇವೆ ಮಾಡದೇ ತಮ್ಮ ಹೊಟ್ಟೆ ತುಂಬಿಸಿಕೊಂಡು ಜನಸಾಮಾನ್ಯರನ್ನು ಕೀಳಾಗಿ ಕಾಣುವ ಬಗ್ಗೆ ಚಾಟಿ ಏಟಿನಂತೆ ದಾಸರೇನೋ ಕೀರ್ತನೆಯಲ್ಲಿ ಹೇಳಿದರು. ಆದರೆ ಇಂದಿಗೂ ತಿದ್ದಿಕೊಂಡರಾ? ಇಲ್ಲ ಅದೇ ಚಾಳಿ ಇದೆ. ಆಗ ನಮ್ಮ ನಾಯಿಗಳಿಗೆ ಬೇಸರ ಬಂದು ಬಿಟ್ಟಿತು.

ಇಡೀ ನಾಯಿ ಸಮೂಹ ಬ್ರಹ್ಮನ ಬಳಿ ಬಂದು ದೂರು ದಾಖಲಿಸಿದವು. ವಿಚಾರಣೆಗೆ ಕಾದು ಕಾದು ಸಾಕಾಗಿ ಹೋಯಿತು. ಇಂದು ಈಗ ನಾಳೆ ನಾಡಿದ್ದು ಅಂತ ತಾರೀಕುಗಳು ಸಿಕ್ಕವೇ ಹೊರತು ಬ್ರಹ್ಮದರ್ಶನ ನಮ್ಮ ನಾಯಿಗಳಿಗೆ ಆಗಲೇ ಇಲ್ಲ!

ಅಲ್ಲಿದ್ದ ಸೇವಕರು ಒಬ್ಬೊಬ್ಬರು ಒಂದೊಂದು ಐಡಿಯಾ ಕೊಟ್ಟರು. ದಬ್ಬೆ ಕಟ್ಟಿ ವಾರ ಕಾದರು, ಬಾಲ ನೆಟ್ಟಗಾಗಲಿಲ್ಲ. ಪೈಪಲ್ಲಿ ಬಾಲ ಇಟ್ಟು ನೇರ ಮಾಡಿ ಹಗ್ಗ ಕಟ್ಟಿ ತಿಂಗಳು ಕಾದರು, ಪ್ರಯೋಜನವಾಗಲಿಲ್ಲ. ಕಾದ ಕಬ್ಬಿಣ ಬಾಲದ ಎರಡೂ ತುದಿಗೆ ಅಪ್ಪಚ್ಚಿ ಮಾಡಿ ನೆಟ್ಟಗೆ ಮಾಡಿದರು. ಕೆಲದಿನಗಳ ನಂತರ ಯಥಾ ರೀತಿಯಲ್ಲಿ ಸೊಟ್ಟ!

ಏನೆಲ್ಲಾ ಪ್ರಯತ್ನ ಬ್ರಹ್ಮಲೋಕದಲ್ಲಾದರೂ ಲಾಭವಾಗದೇ ಹೋಯಿತು. ಬಂದಾಗಿದೆ, ಬ್ರಹ್ಮನ ದರ್ಶನವಾದರೂ ಮಾಡದೇ ಹೋಗಬಾರದಂತ ಕಳ್ಳ ಮಾರ್ಗದಿ ಅವನ ಆಸ್ಥಾನಕ್ಕೆ ನುಗ್ಗಿ ನೋಡಿದರೇ... ಅವನೇ ತಲೆ ಮೇಲೆ ಕೈ ಹೊತ್ತು ಕುಳಿತಿದ್ದಾನೆ! ಈ ನಾಯಿ ಗುಂಪಿಗೇ ಅಚ್ಚರಿ. ಮೂರುಲೋಕ ಸೃಷ್ಟಿಸಿದ ಇವನು ಹೀಗೆ ಮಂತ್ರಿಗಿರಿ ಕಳೆದುಕೊಂಡವನಂತೆ ಮಂಕಾಗಿ ಏಕೆ ಕೂತಿರಬಹುದು? ಬ್ರಹ್ಮನಿಗೇನಾಗಿದೆ? ಒಂದು ದೊಡ್ಡ ನಾಯಿ ಜೋರಾಗಿ ಬೊಗಳಿ ಬ್ರಹ್ಮನ ಚಿತ್ತ